# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹೆಚ್.ಆರ್. ಗೋಪಾಲಕೃಷ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕಡೂರು ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಕುರಿತು.

ಓದಲಾಗಿದೆ:- 1) ಮು.ಕಾ.ನಿ.ಅ., ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ:ಜಿಪಂಚಿ/ಆ-1/ಸಿಸಿಎ/ಸಿಆರ್-01/2014-15 ದಿ: 24.04.2015.
2) ಸರ್ಕಾರದ ಕಾರಣ ಕೇಳುವ ನೋಟೀಸ್ ದಿನಾಂಕ 21.06.2016.
3) ಶ್ರೀ ಹೆಚ್.ಆರ್. ಗೋಪಾಲಕೃಷ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕಡೂರು ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ 01.07.2016.
4) ಮು.ಕಾ.ನಿ.ಅ., ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ:ಜಿಪಂಚಿ/ಆ-2/ಸಿಬ್ಬಂದಿ/ಸಿಆರ್-67/2015-16/ದಿ.16.09.2016.

---

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ:-(1)ರ ಪತ್ರದಲ್ಲಿ ಶ್ರೀ ಹೆಚ್.ಆರ್. ಗೋಪಾಲಕೃಷ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕಡೂರು ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಸದರಿಯವರು ಎಸಗಿದ್ದ ಕರ್ತವ್ಯಲೋಪಗಳಿಗೆ ಸಂಬಂಧಿಸಿದಂತೆ, ದಿನಾಂಕ 21.06.2016ರಂದು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 12(1)(ಎ)ರನ್ವಯ ಕಾರಣ ಕೇಳುವ ನೋಟಿಸನ್ನು ಜಾರಿ ಮಾಡಲಾಗಿದ್ದು, ಇದಕ್ಕೆ ಅಧಿಕಾರಿಯು ದಿನಾಂಕ 01.07.2016ರಂದು ನೀಡಿರುವ ಲಿಖಿತ ರಕ್ಷಣಾ ಹೇಳಿಕೆಯಲ್ಲಿ ತಮ್ಮ ವಿರುದ್ದದ ಆರೋಪಗಳನ್ನು ಕೈಬಿಡುವಂತೆ ಕೋರಿರುತ್ತಾರೆ.

ದಿನಾಂಕ 21.06.2016 ರಂದು ಕಡೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಹೆಚ್.ಆರ್.ಗೋಪಾಲಕೃಷ್ಣ, ಇವರಿಗೆ ಜಾರಿ ಮಾಡಲಾಗಿದ್ದ ಕಾರಣ ಕೇಳುವ ನೋಟಿಸಿಗೆ ಅಧಿಕಾರಿಯು ದಿನಾಂಕ 01.07.2016ರಂದು ನೀಡಿದ್ದ ಲಿಖಿತ ರಕ್ಷಣಾ ಹೇಳಿಕೆಗೆ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ದಿನಾಂಕ 16.09.2016ರ ಪತ್ರದಲ್ಲಿ ಸದರಿ ಅಧಿಕಾರಿಯು ನೀಡಿರುವ ಸಮಜಾಯಿಷಿಯನ್ನು ಪರಿಶೀಲಿಸಿ, ಅಧಿಕಾರಿಗೆ ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಬಹುದಾಗಿರುತ್ತದೆಂದು ಅಭಿಪ್ರಾಯಿಸಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿ, ಕಡೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಹೆಚ್.ಆರ್.ಗೋಪಾಲಕೃಷ್ಣ, ಇವರು ಈ ಕೆಳಕಂಡ ಕರ್ತವ್ಯಲೋಪಗಳನ್ನು ಎಸಗಿದ್ದ ಕಾರಣಕ್ಕಾಗಿ ದಿನಾಂಕ 21.06.2016ರಂದು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿಗಳು 1957ರ ನಿಯಮ-12(1)(ಎ)ರನ್ವಯ ಕಾರಣ ಕೇಳುವ ನೋಟಿಸನ್ನು ಜಾರಿ ಮಾಡಲಾಗಿದ್ದು, ಇದಕ್ಕೆ ಅಧಿಕಾರಿಯು ದಿನಾಂಕ 01.07.2016ರಂದು ನೀಡಿರುವ

ಲಿಖಿತ ರಕ್ಷಣಾ ಹೇಳಿಕೆಯಲ್ಲಿ ತಾಲ್ಲೂಕು ಪಂಚಾಯತ್ ಚುನಾವಣೆ ಸಂಬಂಧ ಚುನಾವಣಾಧಿಕಾರಿಯಾಗಿ ನೇಮಿಸಿದ್ದ ಕಾರಣ, ದಿನಾಂಕ 24.02.2016ರಂದು ನಡೆದ ಕೆ.ಡಿ.ಪಿ ಸಭೆಗೆ ಹಾಜರಾಗಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

(ಅ) ದಿನಾಂಕ: 24.02.2016ರಂದು ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆ.ಡಿ.ಪಿ) ಪ್ರಗತಿ ಪರಿಶೀಲನಾ ಸಭೆಗೆ ಪೂರ್ವಾನುಮತಿ ಪಡೆಯದೇ ಗೈರು ಹಾಜರಾಗಿರುತ್ತಾರೆ

(ಆ) ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆ.ಡಿ.ಪಿ) ಪ್ರಗತಿ ಪರಿಶೀಲನಾ ಸಭೆಯನ್ನು ಏರ್ಪಡಿಸಿರುವ ಬಗ್ಗೆ ಸಾಕಷ್ಟು ಮುಂಚಿತವಾಗಿ ದಿನಾಂಕ: 17.05.2016 ಮತ್ತು ದಿನಾಂಕ: 19.02.2016 ರಲ್ಲಿ ಸಭಾ ಸೂಚನಾ ಪತ್ರವನ್ನು ಮುದ್ದಾಂ ತಲುಪಿಸಿ ಖುದ್ದಾಗಿ ಹಾಜರಾಗಲು ತಿಳಿಸಿದ್ದರೂ ಸಹ ಪೂರ್ವಾನುಮತಿ ಪಡೆಯದೇ ಗೈರು ಹಾಜರಾಗಿರುತ್ತಾರೆ.

ಶ್ರೀ ಹೆಚ್.ಆರ್.ಗೋಪಾಲಕೃಷ್ಣ, ಇವರ ಲಿಖಿತ ರಕ್ಷಣಾ ಹೇಳಿಕೆಯ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ಇವರ ಅಭಿಪ್ರಾಯವನ್ನು ಪಡೆಯಲಾಗಿ, ಅಧಿಕಾರಿಯು ನೀಡಿರುವ ಸಮಜಾಯಿಷಿಯನ್ನು ಪರಿಶೀಲಿಸಿ, ಎಚ್ಚರಿಕೆಯನ್ನು ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಬಹುದಾಗಿರುತ್ತದೆ ಎಂದು ಅಭಿಪ್ರಾಯಪಟ್ಟಿರುತ್ತಾರೆ.

ಶ್ರೀ ಹೆಚ್.ಆರ್.ಗೋಪಾಲಕೃಷ್ಣ, ಇವರು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ಅಧಿಕಾರಿಯಾಗಿದ್ದು, ದಿನಾಂಕ: 30.11.2016 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿರುತ್ತಾರೆ. ಹಾಗಾಗಿ ಸದರಿ ಅಧಿಕಾರಿಗೆ ದಿನಾಂಕ 21.06.2016ರಂದು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 12(1)(ಎ)ರನ್ವಯ ಮಾಡಿರುವ ದೋಷಾರೋಪಣ ಪಟ್ಟಿಯನ್ನಾಧರಿಸಿ, ಸದರಿ ಅಧಿಕಾರಿಗೆ ದಂಡನೆಯನ್ನು ವಿಧಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಹಾಗೂ ಈ ಪ್ರಕರಣದಲ್ಲಿ ಹಣಕಾಸಿನ ಅವ್ಯವಹಾರ ಇಲ್ಲದೇ ಇರುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214ರನ್ವಯ ಶಿಸ್ತು ಕ್ರಮ ಜರುಗಿಸಲು ಪರಿಗಣಿಸುವುದು ಅವಶ್ಯವೆಂದು ಕಂಡು ಬರುವುದಿಲ್ಲ.

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, ಕಡೂರು ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಶ್ರೀ ಹೆಚ್.ಆರ್.ಗೋಪಾಲಕೃಷ್ಣ, ಇವರನ್ನು ದಿನಾಂಕ 21.06.2016ರಂದು ಜಾರಿ ಮಾಡಿರುವ ಕಾರಣ ಕೇಳುವ ನೋಟಿಸನಲ್ಲಿನ ದೋಷಾರೋಪಣೆಗಳಿಂದ ಕೈಬಿಟ್ಟು ದೋಷಮುಕ್ತರನ್ನಾಗಿ ಮಾಡಬಹುದಾಗಿರುತ್ತದೆ. ಅಂತಯೇ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 43 ವಿಸೇಬಿ 2016 ದಿನಾಂಕ:02.08.2017**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಕಡೂರು ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಶ್ರೀ ಹೆಚ್.ಆರ್.ಗೋಪಾಲಕೃಷ್ಣ, ಇವರನ್ನು ದಿನಾಂಕ

21.06.2016ರಂದು ಜಾರಿ ಮಾಡಿರುವ ಕಾರಣ ಕೇಳುವ ನೋಟಿಸನಲ್ಲಿನ ದೋಷಾರೋಪಣೆಗಳಿಂದ ಕೈಬಿಟ್ಟು ದೋಷಮುಕ್ತರನ್ನಾಗಿ ಮಾಡಿ, ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್. ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

<u>ಇವರಿಗೆ:-</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕಡೂರು.
3) ಸಂಬಂಧಿಸಿದ ಅಧಿಕಾರಿಗೆ.

<u>ಪ್ರತಿ ಮಾಹಿತಿಗಾಗಿ:-</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ(ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.